# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸೋಸಲೆ ಇಂದೂಧರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು - ಸಂಭಾವನೆ ನೀಡುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂ. ಸಿಆಸುಇ 6 ಸೇಇವಿ 2010, ದಿನಾಂಕ. 20-04-2011.
2. ಸರ್ಕಾರದ ಆದೇಶ ಸಂ. ಗ್ರಾಅಪ 16 ಇಎನ್‌ಕ್ಯೂ 2010 (ಭಾಗ-1), ದಿನಾಂಕ. 23-08-2011 .
3. ವಿಚಾರಣಾಧಿಕಾರಿಯವರ ವರದಿ ದಿನಾಂಕ. 30-10-2013

**ಪ್ರಸ್ತಾವನೆ:**

ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 15,000-00 ಗಳ ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ. 20-04-2011ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಯಾದಗಿರಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಸಣ್ಣ ನೀರಾವರಿ ಇಲಾಖೆಯ 50 ಟ್ಯಾಂಕುಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿಗಳಲ್ಲಿ ನಡೆಸಿದ ಅವ್ಯವಹಾರಗಳ ಆರೋಪಕ್ಕೆ ಸಂಬಂಧಿಸಿದಂತೆ ಶ್ರೀ ಬಿ.ಎಸ್.ಮಾಲಿಬಿರಾದಾರ್, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಯಾದಗಿರಿ ಹಾಗೂ ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಶ್ರೀ ಸೋಸಲೆ ಇಂದೂಧರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ. 23-08-2011ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ದಿನಾಂಕ. 30-10-2013 ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ, ವಿಚಾರಣಾಧಿಕಾರಿಗೆ ಸಂಭಾವನೆ ಮಂಜೂರು ಮಾಡಲು ಮುಂದಿನಂತೆ ಆದೇಶಿಸಿದೆ.

ಆದೇಶ ಸಂಖ್ಯೆ ಗ್ರಾಅಪ 16 ಇಎನ್‌ಕ್ಯೂ 2010, ಬೆಂಗಳೂರು, ದಿನಾಂಕ. 18-11-2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಸೋಸಲೆ ಇಂದೂಧರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರು ಸರ್ಕಾರವು ಆದೇಶದಂತೆ ವಿಚಾರಣೆ ಜರುಗಿಸಿ ವರದಿ ಸಲ್ಲಿಸಿರುತ್ತಾರೆ. ವಿಚಾರಣಾಧಿಕಾರಿಗಳಿಗೆ ನಿಗಧಿಪಡಿಸಿರುವ ರೂ. 15,000-00 (ವಾಹನ ಭತ್ಯೆಯೂ ಸೇರಿದಂತೆ) ಗಳನ್ನು ಪಾವತಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಇವರಿಗೆ ಮಂಜೂರಾತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, (ಆಡಿಟ್ ಮತ್ತು ಅಕೌಂಟ್ಸ್), ಬೆಂಗಳೂರು.

ಮು.ತಿ.ನೋ.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಯಾದಗಿರಿ – ಸದರಿ ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್‌ನ್ನು ಬರೆದು ಅವರ ವಿಳಾಸಕ್ಕೆ ನೊಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.
3. ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯತ್, ಯಾದಗಿರಿ.
4. ಶ್ರೀ ಸೋಸಲೆ ಇಂದೂಧರ , ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.8, 15ನೇ ಅಡ್ಡ ರಸ್ತೆ, 5ನೇ ಹಂತ ಜೆ.ಪಿ.ನಗರ, ಬೆಂಗಳೂರು.
5. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಯಾದಗಿರಿ.
6. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಹೆಚ್ಚುವರಿ ಕಾರ್ಯದರ್ಶಿ, ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
7. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಶಾಖೆ.